ಸೊರಬ	1107		1560
ತೀರ್ಥಹಳ್ಳಿ	246		1520
ಒಟ್ಟು	**4796**		**10400**

ಶಿವಮೊಗ್ಗ ಜಿಲ್ಲೆಯ ಪಟ್ಟಣವಾರು, ವರ್ಷವಾರು ವಿವರ (ಗುರಿ)

ನಗರ ಆಶ್ರಯ

	2003–2004	2004–2005	2005–2006
ಭದ್ರಾವತಿ	15		375
ಹೊಸನಗರ	0		10
ಕರಗಲ್	0		40
ಸಾಗರ	12	ಗುರಿ	210
ಶಿಕಾರಿಪುರ	12	ನಿಗದಿಪಡಿಸಿರುವುದಿಲ್ಲ	125
ಶಿವಮೊಗ್ಗ	400		735
ಶಿರಾಳಕೊಪ್ಪ	17		75
ಸೊರಬ	0		155
ತೀರ್ಥಹಳ್ಳಿ	0		135
ಒಟ್ಟು	**456**		**1860**

481 (852) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತೀರ್ಥಹಳ್ಳಿ ತಾಲ್ಲೂಕು ತೀರ್ಥಮತ್ತೂರು ಗ್ರಾಮ ಪಂಚಾಯ್ತಿ ಅಧ್ಯಕ್ಷರು ಅಕ್ರಮವಾಗಿ ಅಕ್ಕಿ ಸಾಗಿಸಿದ್ದು, ಇದರ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗ್ರಾಮ ಪಂಚಾಯ್ತಿ ಅಧ್ಯಕ್ಷರ ಸದಸ್ಯತ್ವವನ್ನು ರದ್ದುಗೊಳಿಸಲು ತೀರ್ಥಹಳ್ಳಿ ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿಗಳು, ಶಿವಮೊಗ್ಗ ಜಿಲ್ಲಾ ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆಯೇ? ಹೌದಾದಲ್ಲಿ ಯಾವಾಗ;

ಇ) ತೀರ್ಥಹಳ್ಳಿ ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿಗಳು ಪತ್ರ ಬರೆದು ಸುಮಾರು ಎಂಟು ತಿಂಗಳಾದರೂ ಜಿಲ್ಲಾ ಪಂಚಾಯತ್ ನಿರ್ವಹಣಾಧಿಕಾರಿಗಳು ಕ್ರಮ ಕೈಗೊಳ್ಳದಿರಲು ಕಾರಣವೇನು? ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಬಂದಿದೆ.

ಆ) ಇಲ್ಲ.

ಇ) ತೀರ್ಥಹಳ್ಳಿ ಕಾರ್ಯನಿರ್ವಾಹಕ ಅಧಿಕಾರಿಗಳು ಸದರಿ ಪ್ರಕರಣದ ಬಗ್ಗೆ ದಿ: 4–10–2005ರಲ್ಲಿ ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಿರುತ್ತಾರೆ. ತೀರ್ಥಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ: 320/2005 ದಿನಾಂಕ : 4.10.2005ರಲ್ಲಿ ಐ.ಪಿ.ಸಿ. 420 ರನ್ವಯ ದೂರು ದಾಖಲಾಗಿರುತ್ತದೆ. ಜಿಲ್ಲಾ ಪಂಚಾಯ್ತಿ ಕಛೇರಿಯಿಂದ ದಿನಾಂಕ 14.11.2005ರಲ್ಲಿ ಅಧ್ಯಕ್ಷರಿಗೆ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದೆ. ದಿನಾಂಕ : 3.12.2005ರಲ್ಲಿ ಗ್ರಾಮ ಪಂಚಾಯ್ತಿ ಅಧ್ಯಕ್ಷರು ರಕ್ಷಣಾ ಹೇಳಿಕೆ ನೀಡಿರುತ್ತಾರೆ. ಪ್ರಕರಣವು ನ್ಯಾಯಾಲಯದಲ್ಲಿ ಕೋರ್ಟ್ ಪ್ರಕರಣ ಸಂಖ್ಯೆ: ಸಿ.ಆರ್.ನಂ. 414105 / 4–10–2005 ಆಗಿರುತ್ತದೆ.

ನ್ಯಾಯಾಲಯದಲ್ಲಿ ಪ್ರಕರಣ ಇರುವುದರಿಂದ ಸದ್ಯಕ್ಕೆ ಕ್ರಮ ಕೈಗೊಂಡಿರುವುದಿಲ್ಲ.

482 (853) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತೀರ್ಥಹಳ್ಳಿ ಮತ್ತು ಹೊಸನಗರ ತಾಲ್ಲೂಕುಗಳಲ್ಲಿ ಮಾರ್ಚಿ ಅಂತ್ಯಕ್ಕೆ ಖಾಲಿ ಇದ್ದ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರ ಸಂಖ್ಯೆ ಎಷ್ಟು;

ಆ) ಈ ಸಾಲಿನ ವರ್ಗಾವಣೆ ಪ್ರಕ್ರಿಯೆಯಲ್ಲಿ ಈ ತಾಲ್ಲೂಕುಗಳಿಂದ ವರ್ಗಾವಣೆಗೊಂಡ ಶಿಕ್ಷಕರ ಸಂಖ್ಯೆ ಎಷ್ಟು (ತಾಲ್ಲೂಕುವಾರು. ಪ್ರಾಥಮಿಕ ಹಾಗೂ ಪ್ರೌಢಶಾಲಾವಾರು ವಿವರ ನೀಡುವುದು):

ಇ) ತೀರ್ಥಹಳ್ಳಿ ತಾಲ್ಲೂಕಿನಲ್ಲಿ ಇದುವರೆಗೆ ಫಲಿತಾಂಶ ಉತ್ತಮವಾಗಿರುವುದರಿಂದ ಹೆಚ್ಚಿನ ಸಂಖ್ಯೆಯ ಶಿಕ್ಷಕರ ಕೊರತೆಯಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುವುದು ಎಂಬ ವಿಷಯ ಸರ್ಕಾರದ ಗಮನದಲ್ಲಿದೆಯೇ :

ಈ) ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳ ಕುರಿತಂತೆ, ಹೊಸನಗರ ಮತ್ತು ತೀರ್ಥಹಳ್ಳಿ ತಾಲ್ಲೂಕುಗಳ ಖಾಲಿ ಹುದ್ದೆಗಳ ಮಾಹಿತಿ ಈ ಕೆಳಕಂಡಂತಿದೆ.

ಹೊಸನಗರ ತಾಲ್ಲೂಕು	–	57 ಹುದ್ದೆಗಳು
ತೀರ್ಥಹಳ್ಳಿ ತಾಲ್ಲೂಕು	–	124 ಹುದ್ದೆಗಳು

ಪ್ರೌಢಶಾಲೆಗಳ ಕುರಿತಂತೆ :

ಹೊಸನಗರ ತಾಲ್ಲೂಕು	–	08 ಹುದ್ದೆಗಳು
ತೀರ್ಥಹಳ್ಳಿ ತಾಲ್ಲೂಕು	–	11 ಹುದ್ದೆಗಳು